**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಕೆ.ಎ. ತಿಪ್ಪೇಸ್ವಾಮಿ, ಶ್ರೀ ಬಿ.ಎಂ. ಫಾರೂಖ್, ಶ್ರೀ ಟಿ.ಎ. ಶರವಣ ಹಾಗೂ ಶ್ರೀ ಸಿ.ಎನ್. ಮಂಜೇಗೌಡ ರವರುಗಳು ನಿಯಮ 72 ರ ಮೇರೆಗೆ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರ ಉತ್ತರ:**

## ಪ್ರಶ್ನೆ

**ವಿಷಯ:** ನಗರ ಸ್ಥಳೀಯ ಸಂಸ್ಥೆಗಳಲ್ಲಿ ಅಧ್ಯಕ್ಷ ಮತ್ತು ಉಪಾಧ್ಯಕ್ಷ ಸ್ಥಾನಗಳಿಗೆ ಮೀಸಲಾತಿ ನೀಡುವ ಸಮಸ್ಯೆಯು ಬಿಡಿಸಲಾಗದ ಕಗ್ಗಂಟಾಗಿ ಪರಿಣಮಿಸಿದೆ. ರಾಜ್ಯದಲ್ಲಿ ಹಿಂದುಳಿದ ವರ್ಗಗಳಿಗೆ ರಾಜಕೀಯ ಪ್ರತಿನಿಧಿ ನೀಡುವ ವಿಷಯಕ್ಕೆ ಸಂಬಂಧಿಸಿದಂತೆ ನ್ಯಾಯಾಲಯದಲ್ಲಿ ಪ್ರಕರಣ ಬಾಕಿ ಇರುವುದರಿಂದ ಹಾಗೂ ರಾಜಕೀಯ ಪ್ರತಿನಿಧ್ಯದ ಕುರಿತು ಸರ್ಕಾರ ಅಧ್ಯಾಯನ ನಡೆಸುತ್ತಿದೆ. ಇವೆರಡರ ಪ್ರತಿಫಲವಾಗಿ ರಾಜ್ಯದಲ್ಲಿ ಕೆಲವು ನಗರ ಸ್ಥಳೀಯ ಸಂಸ್ಥೆಗಳಲ್ಲಿ ಚುನಾವಣೆ ನಡೆದಾಗಿನಿಂದ ಇಲ್ಲಿಯವರೆವಿಗೂ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಚುನಾವಣೆ ನಡೆದು ಎರಡು ವರ್ಷಗಳೆ ಕಳೆದರೂ ಅಧ್ಯಕ್ಷ ಮತ್ತು ಉಪಾಧ್ಯಕ್ಷ ನೇಮಕವಾಗದಿರುವುದರಿಂದ ಸಾಮಾನ್ಯ ಸಭೆ ನಡೆಸಲು ಸಾಧ್ಯವಾಗುತ್ತಿಲ್ಲ. ಇದರಿಂದಾಗಿ ಆಯ್ಕೆಯಾದ ಸದಸ್ಯರು ತಮ್ಮ ಅಧಿಕಾರ ಅವಧಿ ಹೀಗೆಯೇ ಮುಗಿದು ಹೋಗುತ್ತದೆ ಎನ್ನುವ ಆತಂಕದಲ್ಲಿ ಇದ್ದಾರೆ. ಇನ್ನೂ ಕೆಲವು ನಗರ ಸ್ಥಳೀಯ ಸಂಸ್ಥೆಗಳಿಗೆ ಎರಡನೇ ಅವಧಿಗೆ ಅಧ್ಯಕ್ಷ ಮತ್ತು ಉಪಾಧ್ಯಕ್ಷ ಸ್ಥಾನಗಳಿಗೆ ಮೀಸಲಾತಿ ಪ್ರಕಟಿಸದಿರುವುದರಿಂದ ಜನ ಪ್ರತಿನಿಧಿಗಳು ಆಡಳಿತದಿಂದ ದೂರ ಉಳಿಯುವಂತಾಗಿದೆ. ಈ ಸಂಸ್ಥೆಗಳಲ್ಲಿ ಅಧಿಕಾರಿಗಳದ್ದೆ ಕಾರುಬಾರು ವಿಪರ್ಯಾಸವೆಂದರೆ ಒಬ್ಬ ಅಧಿಕಾರಿಗೆ ಒದ್ದಂಕ್ಕಿಂತ ಹೆಚ್ಚು ಸ್ಥಳೀಯ ಸಂಸ್ಥೆಗಳ ಹೊಣೆಗಾರಿಕೆ ನೀಡಲಾಗಿದೆ.

ಮುಂದುವರೆದು, ಕರ್ನಾಟಕ ಮುನ್ಸಿಪಲ್ ಕಾಯ್ದೆ (ವಾರ್ಡು ಕಮಿಟಿ) ನಿಯಮಗಳು 2016 ಪ್ರಕಾರ ನಗರ ಸ್ಥಳೀಯ ಸಂಸ್ಥೆಗಳಲ್ಲಿ ವಾರ್ಡು ಸಮಿತಿ ರಚಿಸಬೇಕೆಂಬ ನಿಯಮವಿರುತ್ತದೆ. ಆದರೆ, ರಾಜ್ಯದ 11 ಮಹಾನಗರ ಪಾಲಿಕೆಗಳಲ್ಲಿ ವಾರ್ಡು ಸಮಿತಿ ಮತ್ತು ಏರಿಯಾ ಸಮಿತಿಗಳು ಸಕ್ರಿಯವಾಗಿಲ್ಲ ಮತ್ತು 304 ಪುರಸಭೆಗಳಲ್ಲಿ ವಾರ್ಡು ಸಮಿತಿ ಮತ್ತು ಏರಿಯಾ ಸಮಿತಿಗಳನ್ನು ರಚನೆ ಮಾಡಿಲ್ಲ. ಆದ್ದರಿಂದ, ಸ್ಥಳೀಯ ಸಂಸ್ಥೆಗಳಿಗೆ ಕಾಲಕಾಲಕ್ಕೆ ಚುನಾವಣೆಗಳನ್ನು ನಡೆಸಬೇಕು ಮತ್ತು ರಾಜ್ಯದ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳಲ್ಲಿ ವಾರ್ಡ್ ಸಮಿತಿಗಳನ್ನು ರಚಿಸಿ ಸಕ್ರಿಯವಾಗಿರುವಂತೆ ನೋಡಿಕೊಳ್ಳಬೇಕು ಎನ್ನುವ ಮಹತ್ವದ ವಿಷಯದ ಕುರಿತು ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರ ಗಮನ ಸೆಳೆಯುವುದು.

## ಉತ್ತರ

ಅಧ್ಯಕ್ಷ/ ಉಪಾಧ್ಯಕ್ಷರ ಮೀಸಲಾತಿ ನಿಗಧಿಪಡಿಸುವುದಕ್ಕೆ ಸಂಬಂಧಿಸಿದಂತೆ ಈ ಕೆಳಕಂಡ ನ್ಯಾಯಾಲಯ ಪ್ರಕರಣಗಳು ಬಾಕಿ ಇರುತ್ತವೆ;-

1) ಮಾನ್ಯ ಸರ್ವೋಚ್ಚ ನ್ಯಾಯಾಲಯದ ಎಸ್.ಎಲ್.ಪಿ. ಸಂಖ್ಯೆ:19756/2021ರಲ್ಲಿ ದಿನಾಂಕ:15.12.2021 ರಂದು ನೀಡಿರುವ ತೀರ್ಪು ಹಾಗೂ Manmohan Nagar V/s State of Madhya Pradesh & Others ರವರು ಸಲ್ಲಿಸಿರುವ ಮಿಸಲೇನಿಯಸ್ ಅಪ್ಲಿಕೇಷನ್ ಸಂಖ್ಯೆ:31495/2021ಗೆ ಸಂಬಂಧಿಸಿದಂತೆ ದಿನಾಂಕ:17.12.2021ರಂದು ನೀಡಿರುವ ಆದೇಶದನ್ವಯ ಪಂಚಾಯತ್ ರಾಜ್ ಸಂಸ್ಥೆಗಳಲ್ಲಿ ಮತ್ತು ನಗರ ಸ್ಥಳೀಯ ಸಂಸ್ಥೆಗಳಲ್ಲಿ ಹಿಂದುಳಿದ ವರ್ಗಗಳಲ್ಲಿ ರಾಜಕೀಯ ಹಿಂದುಳಿದಿರುವಿಕೆಯನ್ನು ಗುರುತಿಸಲು ಹಾಗೂ ಸದರಿ ಹಿಂದುಳಿದ ವರ್ಗಗಳಿಗೆ ಸೂಕ್ತ ರಾಜಕೀಯ ಪ್ರಾತಿನಿಧ್ಯ ಕಲ್ಪಿಸಲು ಅಧ್ಯಯನ ನಡೆಸಿ ಶಿಫಾರಸ್ಸು ಮಾಡಲು ನಿವೃತ್ತ ನ್ಯಾಯಾಧೀಶರಾದ ಡಾ|| ಜಸ್ಟೀಸ್ ಕೆ.ಭಕ್ತವತ್ಸಲ ರವರ ಅಧ್ಯಕ್ಷತೆಯಲ್ಲಿ ಆಯೋಗವನ್ನು ರಚಿಸಲಾಗಿರುತ್ತದೆ. ಪ್ರಸ್ತುತ ಆಯೋಗವು ಅಂತಿಮ ವರದಿಯನ್ನು ನೀಡಿದ್ದು, ಈ ವರದಿಯನ್ನು ದಿನಾಂಕ:05.10.2023ರಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ಚರ್ಚಿಸಿ ನಗರ ಸ್ಥಳೀಯ ಸಂಸ್ಥೆಗಳ ಚುನಾವಣೆ ವಿಷಯವನ್ನು ನಿರ್ವಹಿಸಲು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ವ್ಯಾಪ್ತಿಗೆ ಹಸ್ತಾಂತರಿಸಲು ಅನುಮೋದನೆ ನೀಡಿರುತ್ತದೆ.

ಆದ್ದರಿಂದ ನಗರಾಭಿವೃದ್ಧಿ ಇಲಾಖೆಯಿಂದ ನಗರ ಸ್ಥಳೀಯ ಸಂಸ್ಥೆಗಳ ಚುನಾವಣೆ ವಿಷಯವನ್ನು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಗೆ ಹಸ್ತಾಂತರಿಸುವ ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ.

2) ನಗರ ಸ್ಥಳೀಯ ಸಂಸ್ಥೆಗಳ ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಹುದ್ದೆಗಳ ಮೀಸಲಾತಿಗೆ ಸಂಬಂಧಿಸಿದಂತೆ ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿ ಎಸ್.ಎಲ್.ಪಿ. (ಸಿವಿಲ್) ಸಂಖ್ಯೆ:7090/2021 ದಾಖಲಾಗಿದ್ದು, ಪ್ರಕರಣದ ವಿಚಾರಣೆಯ ಸಂದರ್ಭದಲ್ಲಿ ಮಾನ್ಯ ನ್ಯಾಯಾಲಯವು ರಾಜ್ಯದಲ್ಲಿರುವ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳಿಗೆ ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಸ್ಥಾನಗಳಿಗೆ 1 ರಿಂದ 10ನೇ ಅವಧಿಗೆ ಮೀಸಲಾತಿಯನ್ನು NIC ಮೂಲಕ ಸಾಫ್ಟ್‌ವೇರ್ ಮಾಡಿ ನಿಗದಿಪಡಿಸುವಂತೆ ನಿರ್ದೇಶನ ನೀಡಿರುತ್ತದೆ. ಸದರಿ ನಿರ್ದೇಶನದನ್ವಯ NIC ರವರು ಒದಗಿಸಿರುವ ಮೀಸಲಾತಿಯನ್ನು ಪರಿಶೀಲಿಸಿ ಮಾನ್ಯ ಸರ್ವೋಚ್ಚ ನ್ಯಾಯಾಲಯಕ್ಕೆ ಅಫಿಡವಿಟ್ ದಾಖಲಿಸಲಾಗಿರುತ್ತದೆ. ಪ್ರಕರಣವು ದಿನಾಂಕ:13.12.2023 ರಂದು ವಿಚಾರಣೆಗೆ ಬರಲಿದ್ದು, ಮಾನ್ಯ ಸರ್ವೋಚ್ಚ ನ್ಯಾಯಾಲಯದ ತೀರ್ಪು/ನಿರ್ದೇಶನವನ್ನು ನಿರೀಕ್ಷಿಸಲಾಗಿರುತ್ತದೆ.

ಅಧ್ಯಕ/ಉಪಾಧ್ಯಕ್ಷ ಸ್ಥಾನದ ಅವಧಿ ಮುಕ್ತಾಯಗೊಂಡಿರುವ ನಗರ ಸ್ಥಳೀಯ ಸಂಸ್ಥೆಗಳ ಆಡಳಿತ ಹಿತದೃಷ್ಟಿಯಿಂದ ಆಡಳಿತಾಧಿಕಾರಿಗಳನ್ನು ನೇಮಕ ಮಾಡಲಾಗಿದೆ.

ಕರ್ನಾಟಕ ಪೌರಸಭೆಗಳ ಅಧಿನಿಯಮ 1964ಕ್ಕೆ ತಿದ್ದುಪಡಿ ತಂದು ಪ್ರಕರಣ 80 A ನ್ನು ಹೊಸದಾಗಿ ಸೇರ್ಪಡೆ ಮಾಡಲಾಗಿದ್ದು ಏರಿಯಾ ಸಭೆಗಳ ರಚನೆ, ಪ್ರಕಾರ್ಯಗಳನ್ನು ವಿವರಿಸಲಾಗಿರುತ್ತದೆ. ಅದರಂತೆ, ಸ್ಥಳೀಯ ಸಂಸ್ಥೆಗಳಿಗೆ ಈಗಾಗಲೇ ವಾರ್ಡ್ ಸಮಿತಿಗಳನ್ನು ರಚಿಸಲು ಅಗತ್ಯ ಕ್ರಮವಹಿಸುವಂತೆ ಎಲ್ಲಾ ಜಿಲ್ಲಾಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ.

ಮುಂದುವರೆದು, ಕರ್ನಾಟಕ ಮುನಿಸಿಪಲ್ ಕಾರ್ಪೋರೇಷನ್ ಅಧಿನಿಯಮ 1976ರಡಿ ರಚಿಸುವ ವಾರ್ಡ್ ಸಮಿತಿಗಳ ಜವಾಬ್ದಾರಿ ಮತ್ತು ಕಾರ್ಯವೈಖರಿಗಳ ಬಗ್ಗೆ ಅಧಿನಿಯಮ 13-ಕೆ ರನ್ವಯ ನಗರಾಭಿವೃದ್ಧಿ ಇಲಾಖೆ ವತಿಯಿಂದ ಅಧಿಸೂಚನೆ ಸಂಖ್ಯೆ: UDD 507 MNY 2012, ದಿನಾಂಕ:22.06.2016 ರಂದು ಪ್ರಕಟಿಸಲಾಗಿರುತ್ತದೆ. ಕರ್ನಾಟಕ ಮುನಿಸಿಪಲ್ ಕಾರ್ಪೋರೇಷನ್ (ವಾರ್ಡ್ ಸಮಿತಿ) ನಿಯಮಗಳು 2015ರಂತೆ ಬೃಹತ್ ಬೆಂಗಳೂರು ಮಹಾನಗರಪಾಲಿಕೆಯವರು ರಚಿಸಿರುವ ಮಾದರಿಯಲ್ಲಿ ಮಹಾನಗರಪಾಲಿಕೆಯ ಎಲ್ಲಾ ವಾರ್ಡ್‌ಗಳಲ್ಲಿ ವಾರ್ಡ್ ಸಮಿತಿಯನ್ನು ರಚಿಸಲು ಹಾಗೂ ತೆಗೆದುಕೊಂಡಿರುವ ಕ್ರಮಗಳ ಇತ್ತೀಚಿನ ಮಾಹಿತಿಯನ್ನು ಸರ್ಕಾರಕ್ಕೆ ಸಲ್ಲಿಸುವಂತೆ ದಿನಾಂಕ:21.08.2023 ರಂದು ಪತ್ರ ಬರೆಯಲಾಗಿರುತ್ತದೆ.

**ಮಹಾನಗರ ಪಾಲಿಕೆಗಳಲ್ಲಿ ವಾರ್ಡ್ ಸಮಿತಿಗಳನ್ನು ರಚಿಸುವ ಬಗ್ಗೆ ಮಾಹಿತಿ ಈ ಕೆಳಕಂಡಂತೆ ಇರುತ್ತದೆ:**

- 35-ತುಮಕೂರು, 35-ಶಿವಮೊಗ್ಗ ಮಹಾನಗರಪಾಲಿಕಗಳ ವಾರ್ಡ ಸಮಿತಿಗಳನ್ನು ರಚಿಸಲಾಗಿರುತ್ತದೆ.
- 60-ಮಂಗಳೂರು ಮಹಾನಗರ ಪಾಲಿಕೆಯಲ್ಲಿ 60 ವಾರ್ಡ್‌ಗಳಿಗೆ ಏರಿಯಾ ಸಭಾಗಳಿಗೆ ಪ್ರತಿನಿಧಿಗಳನ್ನು ನಾಮನಿರ್ದೇಶಿಸಿ ಕಾರ್ಯಗತಗೊಳಿಸುವ ಬಗ್ಗೆ ಪರಿಷತ್ತಿಗೆ ಕಾರ್ಯಸೂಚಿ ಮಂಡಿಸಲಾಗಿದ್ದು, ಪರಿಷತ್ತಿನ ಠರಾವು ಸಂಖ್ಯೆ:48/2023 ರ ಠರಾವಿನಂತೆ ಏರಿಯಾ ಸಭಾ ಉಪನಿಯಮ ರಚನೆಯಾಗುವವರೆಗೆ ಸದರಿ ಕಾರ್ಯಸೂಚಿಯನ್ನು ಮುಂದೂಡಲು ನಿರ್ಣಯಿಸಲಾಗಿರುತ್ತದೆ ಹಾಗೂ ಪರಿಷತ್ತಿನ ಠರಾವು ಸಂಖ್ಯೆ:49/2023 ರಂತೆ ವಾರ್ಡ್ ಸಮಿತಿ ಮತ್ತು ಏರಿಯಾ ಸಭಾಗಳ ಸುಲಲಿತ ಕಾರ್ಯನಿರ್ವಹಣೆಗಾಗಿ ಕಲಂ-13ಜೆ ಪ್ರಕಾರ ಉಪನಿಯಮಗಳನ್ನು ರಚಿಸುವ ಬಗ್ಗೆ ಮಾನ್ಯ ಮಹಾಪೌರರ ಅಧ್ಯಕ್ಷತೆಯಲ್ಲಿ ಸಮಿತಿಯನ್ನು